ರಾಜ್ಯದಲ್ಲಿರುವ ಅನಧಿಕೃತ ಪದವಿ ಪೂರ್ವ ಕಾಲೇಜುಗಳ ಬಗ್ಗೆ

೭೬೬. (೧೪೨೪) ಶ್ರೀ ಶಿವಾನಂದ ಪೆಚ್. ಕೌಜಲಗಿ, (ಬೈಲಹೊಂಗಲ). ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಹಾಗೂ ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ.—

ಅ) ರಾಜ್ಯದಲ್ಲಿ ಅನಧಿಕೃತವಾಗಿ ಪದವಿ ಪೂರ್ವ ಕಾಲೇಜುಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಈ ಅನಧಿಕೃತ ಕಾಲೇಜುಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅಂತಹ ಕಾಲೇಜುಗಳ ಆಡಳಿತ ಮಂಡಳಿಗಳ ಮೇಲೆ ಸರ್ಕಾರ ಕೈಗೆತ್ತಿಕೊಂಡಿರುವ ಕ್ರಮವೇನು ?

ಶ್ರೀ ಕೆ. ಪೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಬಂದಿದೆ.

ಆ) ಬಂದಿದೆ.

ಇ) ಇಂತಹ ಕಾಲೇಜುಗಳ ಬಗ್ಗೆ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಣೆ ಕೊಟ್ಟು ಸಾರ್ವಜನಿಕರ ಗಮನಕ್ಕೆ ತರಲಾಗಿದೆ. ಅನಧಿಕೃತವಾಗಿ ನಡೆಯುವ ಕಾಲೇಜುಗಳಿಗೆ ವಿದ್ಯಾರ್ಥಿಗಳನ್ನು ಪಿ.ಯು.ಸಿಕ ತರಗತಿಗೆ ದಾಖಿಲಾತಿ ಮಾಡಕೂಡದು. ಎಂದು ಸಹ ಸಾರ್ವಜನಿಕರಿಗೆ ಸೂಚನೆ ಕೊಡಲಾಗಿದೆ.

ಗುಲ್ಬರ್ಗಾ ವಿಶ್ವವಿದ್ಯಾಲಯಕ್ಕೆ ಬಸವೇಶ್ವರರ ಹೆಸರನ್ನು ಇಡುವ ಬಗ್ಗೆ

೭೬೭ (೧೪೧೪) ಶ್ರೀ ಬಸನಗರಾಜ ಪಾಟೀಲ್ ಅಟ್ಟೂರ್, (ಬಸವಕಲ್ಯಾಣ).—ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ. —

ಅ) ಗುಲ್ಬರ್ಗಾ ವಿಶ್ವವಿದ್ಯಾನಿಲಯಕ್ಕೆ ಹೊಸದಾಗಿ ನಾಮಕರಣ ಮಾಡಲು ಸಾರ್ವಜನಿಕರಿಂದ ಅರ್ಜಿಗಳು ಬಂದಿವೆಯೇ ?

ಆ) ಬಸವೇಶ್ವರ ವಿಶ್ವವಿದ್ಯಾನಿಲಯ ಎಂದು ಬದಲಾಯಿಸಲು ಸರ್ಕಾರಕ್ಕಿರುವ ತೊಂದರೆ ಏನು ?

ಇ) ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮ ಏನು ?

ಶ್ರೀ ಕೆ. ಪೆಚ್. ರಂಗನಾಥ್ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು)

ಅ) ಹೌದು.

ಆ) ಒಂದೇ ಒಂದು ಮನವಿ ಬಂದಿದೆ.

ಇ) ಔಪಚಾರಿಕವಾಗಿ ಗುಲ್ಬರ್ಗಾ ವಿಶ್ವವಿದ್ಯಾನಿಲಯದಿಂದ ಪ್ರಸ್ತಾವನೆ ಬಂದ ಮೇಲೆ ಈ ವಿಷಯವನ್ನು ಪರಿಗಣಿಸಲಾಗುವುದು.

ಪ್ರಾಥಮಿಕ, ಪ್ರೌಢ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ಒದಗಿಸುವ ಬಗ್ಗೆ

೭೬೮ (೧೪೨೨) ಶ್ರೀ ಶಿವಾನಂದ ಪೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—